ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ:ಕಾಶಿಇ/ಶೈವಿ/237/SWF/TWF/2019-20

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು-560001.
ದಿನಾಂಕ:10.02.2020

**ಸುತ್ತೋಲೆ**

**ವಿಷಯ:** ಸರ್ಕಾರಿ/ಖಾಸಗಿ ಅನುದಾನಿತ ಪದವಿ ಕಾಲೇಜುಗಳ ವಿದ್ಯಾರ್ಥಿಗಳಿಂದ ಹಾಗೂ ಬೋಧಕರುಗಳಿಂದ ಸಂಗ್ರಹಿಸಲಾಗುವ ವಿದ್ಯಾರ್ಥಿಗಳ ಕ್ಷೇಮಾಭಿವೃದ್ಧಿ ನಿಧಿ ಹಾಗೂ ಶಿಕ್ಷಕರ ಕಲ್ಯಾಣ ನಿಧಿ ಹಾಗೂ ರಾಷ್ಟ್ರೀಯ ಶಿಕ್ಷಕರ ಕಲ್ಯಾಣ ಪ್ರತಿಷ್ಠಾನ ಈ ನಿಧಿಗಳ ಮೊತ್ತವನ್ನು ಬಳಸಿಕೊಳ್ಳುವ ಬಗ್ಗೆ.

**ಉಲ್ಲೇಖ:**
1. ದಿನಾಂಕ:01-01-2020ರ ಸಭಾ ಸೂಚನಾ ಪತ್ರ ಸಂಖ್ಯೆ:ಶಿಕನಿ/ಆಡಳಿತ(1)/ರಾಸಭೆ 01/2019-20 ರಂತೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಸಭೆ.
2. ಈ ಕಛೇರಿ ಸಮಸಂಖ್ಯೆ ಪತ್ರ ದಿನಾಂಕ:31/01/2020

** ** **

ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯಲ್ಲಿ 415 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು ಹಾಗೂ 321 ಖಾಸಗಿ ಅನುದಾನಿತ ಕಾಲೇಜುಗಳಿದ್ದು, ಅವುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ವಿದ್ಯಾರ್ಥಿಯಿಂದ ಪ್ರತಿವರ್ಷ ವಿದ್ಯಾರ್ಥಿಗಳ ಕ್ಷೇಮಾಭಿವೃದ್ಧಿ ನಿಧಿಗೆ ರೂ.25/-ಗಳ ಶುಲ್ಕವನ್ನು ಸಂಗ್ರಹಿಸಲಾಗುತ್ತಿದೆ. ಈ ಶುಲ್ಕದಲ್ಲಿ ರೂ.10/-ಗಳು ಸಂಬಂಧಪಟ್ಟ ಕಲ್ಯಾಣ ನಿಧಿಗೆ ಪಾವತಿಯಾಗುತ್ತಿದ್ದು, ಉಳಿದ ರೂ.15/-ಗಳನ್ನು ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಪ್ರಾಂಶುಪಾಲರೇ ಬಳಸಿಕೊಳ್ಳಬಹುದಾಗಿದೆ. ಹಾಗೂ ಶಿಕ್ಷಕರ ಕಲ್ಯಾಣ ನಿಧಿಗೆ ಪ್ರತಿ ವಿದ್ಯಾರ್ಥಿಯಿಂದ ಪ್ರತಿ ವರ್ಷ ರೂ.25/-ಗಳ ಶುಲ್ಕವನ್ನು ಸಂಗ್ರಹಿಸಲಾಗುತ್ತಿದ್ದು, ಈ ಮೊತ್ತವನ್ನು ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿಗೆ ಜಮೆ ಮಾಡಲಾಗುತ್ತಿದೆ, ಮತ್ತು ಶಿಕ್ಷಕರ ಧ್ವಜ ಬಾಬ್ತು ರೂ 20/- ಗಳನ್ನು ಸಂಗ್ರಹಿಸಿ ನಿಧಿಗೆ ಜಮಾ ಮಾಡಲಾಗುತ್ತಿದೆ.

ಸದರಿ ಮೊತ್ತವನ್ನು ಪ್ರಾಥಮಿಕ, ಪ್ರೌಢಶಿಕ್ಷಣ ಹಾಗೂ ಪದವಿಪೂರ್ವ ಶಿಕ್ಷಣ ಇಲಾಖೆಯ ವಿದ್ಯಾರ್ಥಿಗಳ ಹಾಗೂ ಶಿಕ್ಷಕರ ಕ್ಷೇಮಾಭಿವೃಧ್ಧಿಗೆ ಹೆಚ್ಚಾಗಿ ಬಳಸಲಾಗುತ್ತಿದ್ದು, ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯ ಸರ್ಕಾರಿ/ಖಾಸಗಿ ಅನುದಾನಿತ ಕಾಲೇಜುಗಳಿಂದ ಶುಲ್ಕ ಸಂಗ್ರಹಿಸಲಾಗುತ್ತಿದ್ದು, ಅದರ ಪೂರ್ಣ ಉಪಯೋಗ ಫಲಾನುಭವಿಗಳಾದ ವಿದ್ಯಾರ್ಥಿಗಳು ಹಾಗೂ ಬೋಧಕರುಗಳಿಗೆ ಪೂರ್ಣ ಮಟ್ಟದಲ್ಲಿ ತಲುಪದಿರುವುದು ಒಂದು ಕೊರತೆಯಾಗಿದೆ. ಇದನ್ನು ಸರಿಪಡಿಸಲು ಇಲಾಖೆಯು, ಕಾಲೇಜು ಶಿಕ್ಷಣ ಇಲಾಖೆಯ ಅಧೀನದ ಸರ್ಕಾರಿ /ಖಾಸಗಿ ಅನುದಾನಿತ ಕಾಲೇಜುಗಳ ವಿದ್ಯಾರ್ಥಿಗಳು ಹಾಗೂ ಬೋಧಕರುಗಳಿಗೆ ತಲುಪುವಂತಹ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಚಿಂತನೆ ನಡೆಸಿದ್ದು, ಈ ನಿಟ್ಟಿನಲ್ಲಿ ಕ್ರಿಯಾ ಯೋಜನೆಯನ್ನು ರೂಪಿಸಲಾಗುತ್ತಿದೆ. **ಆದ್ದರಿಂದ ಇಲಾಖಾ ವ್ಯಾಪ್ತಿಯ ಸರ್ಕಾರಿ/ಖಾಸಗಿ ಅನುದಾನಿತ ಕಾಲೇಜುಗಳಿಂದ ಸದರಿ ಖಾತೆಗೆ ಈಗಾಗಲೇ ಸಂಗ್ರಹಿಸಿರುವ ಮತ್ತು ಮುಂದೆ ಸಂಗ್ರಹಿಸುವ ಶುಲ್ಕಗಳನ್ನು ಇಲಾಖೆಯಿಂದ ಮುಂದಿನ ಆದೇಶ ನೀಡುವವರೆಗೆ *ಸಂಬಂಧಪಟ್ಟ ನಿಧಿಗೆ ಜಮಾ ಮಾಡದೇ ಪ್ರಾಂಶುಪಾಲರ ಖಾತೆಯಲ್ಲೇ ಉಳಿಸಿಕೊಳ್ಳುವಂತೆ ಸೂಚಿಸಲಾಗಿದೆ.***

ಕಾಲೇಜು ಶಿಕ್ಷಣ ಆಯುಕ್ತರು.

ಇವರಿಗೆ :

1) ರಾಜ್ಯದ ಎಲ್ಲಾ ಸರ್ಕಾರಿ/ಖಾಸಗಿ ಅನುದಾನಿತ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳು-ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ.

ಪ್ರತಿಯನ್ನು:

1) ಪ್ರಾದೇಶಿಕ ಜಂಟಿ ನಿರ್ದೇಶಕರು- ಬೆಂಗಳೂರು, ಮೈಸೂರು, ಮಂಗಳೂರು ಶಿವಮೊಗ್ಗ, ಧಾರವಾಡ, ಕಲಬುರಗಿ- ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ.
2) ಮಾಹಿತಿ ಅಧಿಕಾರಿಗಳು ಮಾಹಿತಿ ತಂತ್ರಜ್ಞಾನ ವಿಭಾಗ ಕೇಂದ್ರ ಕಛೇರಿ ಬೆಂಗಳೂರು- ಈ ಸುತ್ತೋಲೆಯನ್ನು ಇಲಾಖೆ ವೆಬ್-ಸೈಟ್ ನಲ್ಲಿ ಪ್ರಕಟಿಸುವುದು.
3) ಕಛೇರಿ ಪ್ರತಿ